<u>1ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ರಾಮನಗರ</u>

<u>S.C.103/2017</u>
<u>S.C.53/2019</u>

ದಿಃ 25.11.2021
(ಸಾಕ್ಷಿಗೆ ಪ್ರಮಾಣವಚನವನ್ನು ಬೋಧಿಸಲಾಯಿತು)

Cw-7 Pw-9

| | | |
|---|---|---|
| ಹೆಸರು | ಃ | ಪ್ರತಾಪ್ |
| ತಂದೆಯ ಹೆಸರು | ಃ | ಚಂದ್ರಶೇಖರ್ |
| ವಯಸ್ಸು | ಃ | 21 ವರ್ಷ |
| ಉದ್ಯೋಗ | ಃ | ಜೆಸಿಬಿ ಆಪರೇಟರ್ |
| ವಾಸಸ್ಥಳ | ಃ | ಪೆದ್ದನಪಾಳ, ತಾವರೆಕೆರೆ |

<u>ಮುಖ್ಯ ವಿಚಾರಣೆಃ ಸರ್ಕಾರಿ ಅಭಿಯೋಜಕರಿಂದಃ</u>

ಸಾಕ್ಷಿದಾರರು ನಿ.ಪಿ.5 ಮತ್ತು 6 ಮಹಜರ್‌ಗಳಲ್ಲಿರುವ ತಮ್ಮ ಸಹಿಗಳನ್ನು ಗುರುತಿಸಿದ್ದು, ಅವುಗಳನ್ನು ನಿ.ಪಿ.5(ಬಿ) ಮತ್ತು 6(ಬಿ) ಎಂದು ಗುರುತಿಸಲಾಯಿತು. ಈ ಸಹಿಗಳನ್ನು ಸುಮಾರು 3-4 ವರ್ಷಗಳ ಹಿಂದೆ ನಮ್ಮ ಮನೆಯ ಬಳಿ ಪೊಲೀಸರು ಬಂದಿದ್ದಾಗ ಮಾಡಿದ್ದೆ. ಆ ಸಮಯದಲ್ಲಿ ಯಾವುದೇ ಆರೋಪಿಗಳು ಇರಲಿಲ್ಲ ಮತ್ತು ಯಾವುದೇ ಸ್ಥಳ ಪರಿಶೀಲನೆ ಮಾಡಿ ನನ್ನ ಸಮಕ್ಷಮ ಯಾವುದೇ ಮಹಜರ್ ಮಾಡಿಲ್ಲ. ನಿ.ಪಿ.5 ಮತು 6ರಲ್ಲಿರುವ ವಿಷಯಗಳು ಗೊತ್ತಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ, ಪಾಟೀ ಸವಾಲು ಮಾಡಲು ಅಭಿಯೋಜಕರು ಕೋರಿದ್ದಾರೆ. ಅದರಂತೆ ಸಾಕ್ಷಿಯನ್ನು ಪ್ರತಿಕೂಲ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅಭಿಯೋಜಕರಿಗೆ ಅನುಮತಿ ನೀಡಲಾಗಿದೆ)

<u>ಪಾಟೀ ಸವಾಲುಃ ಸರ್ಕಾರಿ ಅಭಿಯೋಜಕರಿಂದಃ</u>

ದಿಃ18.10.2016 ರಂದು ಮಧ್ಯಾಹ್ನ 1.30 ರಿಂದ 2.30 ಗಂಟೆವರೆಗೆ ದೇವಮಾಚೋಹಳ್ಳಿ ಗ್ರಾಮದ ಚಾಸಾ.1 ರವರ ಮನೆಯ ಹಿಂಭಾಗ ಡಾ. ಚಿದಾನಂದರವರ ಜಮೀನಿನಲ್ಲಿ ಆರೋಪಿಗಳು ಕೃತ್ಯದ ಸ್ಥಳಗಳನ್ನು ತೋರಿಸಿದ್ದು ಅವುಗಳನ್ನು ಪರಿಶೀಲಿಸಿ ನಮ್ಮ ಸಮಕ್ಷಮ ನಿ.ಪಿ.5 ರಂತೆ ಮಹಜರ್ ಕ್ರಮ ಜರುಗಿಸಿ, ಸ್ಥಳದಲ್ಲಿಯೇ ನಮ್ಮ ಸಹಿಗಳನ್ನು ಪಡೆದರು ಎಂದು ಸೂಚಿಸುವುದು ಸರಿಯಲ್ಲ.

2. ದಿಃ18.10.2016 ರಂದು ಮಧ್ಯಾಹ್ನ 2.45 ಗಿರಿಂದ 3.15 ಗಂಟೆವರೆಗೆ ನಾಗನಹಳ್ಳಿ ಮತ್ತು ತಿಪ್ಪಗೊಂಡನಹಳ್ಳಿ ಡ್ಯಾಂಗೆ ಹೋಗುವ ನಡುವಿನ ರಸ್ತೆಯಲ್ಲಿ ಆರೋಪಿಗಳು ಸಹಚರರೊಂದಿಗೆ ನವೀನ್ ಕುಮಾರನನ್ನು ಕೊಲೆ ಮಾಡಲು ಸಂಚು ರೂಪಿಸಿದ ಸ್ಥಳವನ್ನು ತೋರಿಸಿದ್ದು, ಅದನ್ನು ಪರಿಶೀಲಿಸಿ ನಮ್ಮ ಸಮಕ್ಷಮ ನಿ.ಪಿ.6 ರಂತೆ ಮಹಜರ್ ಕ್ರಮ ಜರುಗಿಸಿ, ಸ್ಥಳದಲ್ಲಿಯೇ ನಮ್ಮ ಸಹಿಗಳನ್ನು ಪಡೆದರು ಎಂದು ಸೂಚಿಸುವುದು ಸರಿಯಲ್ಲ. ಆರೋಪಿಗಳಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎನ್ನುವುದು ಸರಿಯಲ್ಲ.

**ಪಾಟೀ ಸವಾಲುಃ ಶ್ರೀ. ಕೆ.ವಿ.ಕೆ., ಟಿ.ಜಿ., ಮತ್ತು ಎಸ್.ಹೆಚ್.ಎಂ., ವಕೀಲರಿಂದ ಆರೋಪಿಗಳ ಪರವಾಗಿಃ ಇಲ್ಲವೆಂದಿರುತ್ತಾರೆ.**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ.ಸರಿ ಇದೆ ಎಂದು ಸಾಕ್ಷಿ ಒಪ್ಪಿದ್ದಾರೆ

(ಮರುಳಸಿದ್ಧಾರಾಧ್ಯ ಹೆಚ್.ಜೆ)
1ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು/
ವಿಶೇಷ ನ್ಯಾಯಾಧೀಶರು,
ರಾಮನಗರ.